All India Radio: Bangalore
National Bulletin In Kannada
10.07.2026  07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
***************

ಮುಖ್ಯಾಂಶಗಳು

- ರಕ್ಷಣೆ, ಭದ್ರತಾ ಸಹಕಾರ ಒಪ್ಪಂದಕ್ಕೆ ಭಾರತ-ಆಸ್ಟ್ರೇಲಿಯಾ ಸಹಿ
- ಮೂರು ರಾಷ್ಟ್ರಗಳ ಪ್ರವಾಸದ ಅಂತಿಮ ಚರಣದಲ್ಲಿ ಇಂದು ನ್ಯೂಜಿಲೆಂಡ್‌ಗೆ ಪ್ರಧಾನಿ ನರೇಂದ್ರ ಮೋದಿ ಭೇಟಿ
- ಸಾವಿರಾರು ಬೆಂಬಲಿಗರ ನಡುವೆ ಇರಾನ್ ಮಾಜಿ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಅಂತ್ಯಕ್ರಿಯೆ
- ಫಿಫಾ ವಿಶ್ವಕಪ್ ಫುಟ್ಬಾಲ್: ಮೊರಾಕೊ ವಿರುದ್ಧ ಗೆದ್ದು ಸೆಮಿಫೈನಲ್ಸ್ ಪ್ರವೇಶಿಸಿದ ಫ್ರಾನ್ಸ್

---

ಭಾರತ ಮತ್ತು ಆಸ್ಟ್ರೇಲಿಯಾ ರಕ್ಷಣಾ ಮತ್ತು ಭದ್ರತಾ ಸಹಕಾರದ ಕುರಿತು ನೂತನ ಜಂಟಿ ಘೋಷಣೆ ಹಾಗೂ ಮುಕ್ತ ಮತ್ತು ಎಲ್ಲರನ್ನೂ ಒಳಗೊಂಡ ಇಂಡೋ-ಪೆಸಿಫಿಕ್ ಅನ್ನು ಉತ್ತೇಜಿಸಲು ಕಡಲ ಭದ್ರತಾ ಸಹಯೋಗದ ಮಾರ್ಗಸೂಚಿಯನ್ನು ಅಳವಡಿಸಿಕೊಂಡಿವೆ.

ಮೆಲ್ಬೋರ್ನ್‌ನಲ್ಲಿ ನಿನ್ನೆ ನಡೆದ ಮೂರನೇ ಆಸ್ಟ್ರೇಲಿಯಾ-ಭಾರತ ವಾರ್ಷಿಕ ನಾಯಕರ ಶೃಂಗಸಭೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ನಡುವಿನ ನಿಯೋಗ ಮಟ್ಟದ ಮಾತುಕತೆಗಳ ನಂತರ ಈ ಒಪ್ಪಂದಗಳಿಗೆ ಸಹಿ ಹಾಕಲಾಯಿತು.

ಶೃಂಗಸಭೆಯ ನಂತರ ಜಂಟಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತ ಮತ್ತು ಆಸ್ಟ್ರೇಲಿಯಾ - ಚೈತನ್ಯಶೀಲ ಪ್ರಜಾಪ್ರಭುತ್ವಗಳು ಮತ್ತು ಪ್ರಮುಖ ಸಾಗರ ಶಕ್ತಿಗಳಾಗಿವೆ. ೨೦೨೨ ರ ಆರ್ಥಿಕ ಸಹಕಾರ ಮತ್ತು ವ್ಯಾಪಾರ ಒಪ್ಪಂದದ ಯಶಸ್ಸಿನ ಆಧಾರದ ಮೇಲೆ, ದ್ವಿಪಕ್ಷೀಯ ಹೂಡಿಕೆ ಒಪ್ಪಂದದ ಜೊತೆಗೆ ಸಮತೋಲಿತ, ಮಹತ್ವಾಕಾಂಕ್ಷೆಯ ಮತ್ತು ಪರಸ್ಪರ ಪ್ರಯೋಜನಕಾರಿ ಸಮಗ್ರ ಆರ್ಥಿಕ ಸಹಕಾರ ಒಪ್ಪಂದ ತ್ವರಿತಗೊಳಿಸಲು ಎರಡೂ ರಾಷ್ಟ್ರಗಳು ಬದ್ಧವಾಗಿವೆ ಎಂದು ಹೇಳಿದ್ದಾರೆ.

ನಂತರ ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಆಸ್ಟ್ರೇಲಿಯಾದಿಂದ ಭಾರತಕ್ಕೆ ದೀರ್ಘಾವಧಿಗೆ ಯುರೇನಿಯಂ ಪೂರೈಕೆ ನಿಟ್ಟಿನಲ್ಲಿ ನಿರ್ಣಾಯಕ ಒಪ್ಪಂದಕ್ಕೆ ಉಭಯ ದೇಶಗಳು ಸಹಿ ಹಾಕಿವೆ.

ಈ ಒಪ್ಪಂದವು ಭಾರತದ ಶುದ್ಧ ಇಂಧನ ಯೋಜನೆಯನ್ನು ಬಲಪಡಿಸುವ ಮತ್ತು ಅದರ ನಿವ್ವಳ-ಶೂನ್ಯ ಗುರಿಗಳನ್ನು ಬೆಂಬಲಿಸುವ ನಿರೀಕ್ಷೆಯಿದೆ ಎಂದು ತಿಳಿಸಿದ್ದಾರೆ.

---

ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಮೂರು ರಾಷ್ಟ್ರಗಳ ಪ್ರವಾಸದ ಮೂರನೇ ಮತ್ತು ಅಂತಿಮ ಚರಣದಲ್ಲಿ ಇಂದು ನ್ಯೂಜಿಲೆಂಡ್‌ಗೆ ಭೇಟಿ ನೀಡಲಿದ್ದಾರೆ. ಎರಡು ದಿನಗಳ ಭೇಟಿಗಾಗಿ ಅವರು ಇಂದು ಆಕ್ಲೆಂಡ್ ತಲುಪಲಿದ್ದಾರೆ.

ಭೇಟಿಯ ಸಮಯದಲ್ಲಿ ಅವರು ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ.

ಕಳೆದ ಎರಡು ವರ್ಷಗಳಲ್ಲಿ, ವಿಶೇಷವಾಗಿ ವ್ಯಾಪಾರ ಮತ್ತು ವಾಣಿಜ್ಯ ಹಾಗೂ ರಕ್ಷಣಾ ಕ್ಷೇತ್ರಗಳಲ್ಲಿ ಗಮನಾರ್ಹ ಪ್ರಗತಿಯನ್ನು ಕಂಡಿರುವ ದ್ವಿಪಕ್ಷೀಯ ಸಂಬಂಧದ ಸಂಪೂರ್ಣ ವ್ಯಾಪ್ತಿಯನ್ನು ಉಭಯ ನಾಯಕರು ಪರಿಶೀಲಿಸಲಿದ್ದಾರೆ.

ಕಳೆದ ೪೦ ವರ್ಷಗಳಲ್ಲಿ ಭಾರತೀಯ ಪ್ರಧಾನಿಯೊಬ್ಬರು ಮೊದಲ ಬಾರಿಗೆ ನ್ಯೂಜಿಲೆಂಡ್‌ಗೆ ಭೇಟಿ ನೀಡುತ್ತಿದ್ದಾರೆ.

ಭಾರತ ಮತ್ತು ನ್ಯೂಜಿಲೆಂಡ್ ನಡುವೆ ಇರುವ ಬಲವಾದ ಜನರ ಸಂಬಂಧಗಳ ಪ್ರತಿಬಿಂಬವಾಗಿ, ಪ್ರಧಾನಿ ನರೇಂದ್ರ ಮೋದಿಯವರು ಈ ಭೇಟಿಯ ಸಮಯದಲ್ಲಿ ಭಾರತೀಯ ಸಮುದಾಯವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

---

ಭಾರತ ತನ್ನ ಕೌಶಲ್ಯಪೂರ್ಣ ಮತ್ತು ಬಲವಾದ ಸಂಸ್ಥೆಗಳು ಹಾಗೂ ನಾವೀನ್ಯತೆ ಪರಿಸರ ವ್ಯವಸ್ಥೆಯಿಂದಾಗಿ ಜಾಗತಿಕ ಸಾಮರ್ಥ್ಯ ಕೇಂದ್ರಗಳಿಗೆ ಆದ್ಯತೆಯ ತಾಣವಾಗಿ ಹೊರಹೊಮ್ಮುತ್ತಲೇ ಇದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ ಸಿಐಐ ರಾಷ್ಟ್ರೀಯ ಜಿಸಿಸಿ ವ್ಯವಹಾರ ಶೃಂಗಸಭೆ ಉದ್ದೇಶಿಸಿ ಮಾತನಾಡಿದ ಅವರು, ಭಾರತ ಎರಡು ಸಾವಿರದ ೧೦೦ ಕ್ಕೂ ಹೆಚ್ಚು ಜಿಸಿಸಿ ಗಳನ್ನು ಆಯೋಜಿಸುತ್ತಿದೆ. ಈ ಮೂಲಕ ೨೩ ಲಕ್ಷ ವೃತ್ತಿಪರರ ನೇರ ನೇಮಕ ಮತ್ತು ಸುಮಾರು ೧೦೦ ಶತಕೋಟಿ ಡಾಲರ್‌ಗಳ ವಾರ್ಷಿಕ ಆದಾಯ ಗಳಿಸುತ್ತದೆ ಎಂದು ತಿಳಿಸಿದರು.

ಜಾಗತಿಕ ಸಾಮರ್ಥ್ಯ ಕೇಂದ್ರಗಳು ಎಂಜಿನಿಯರಿಂಗ್, ಸಂಶೋಧನೆ, ಕೃತಕ ಬುದ್ಧಿಮತ್ತೆ, ಸೈಬರ್ ಭದ್ರತೆ, ಹಣಕಾಸು, ಉತ್ಪನ್ನ ವಿನ್ಯಾಸ ಮತ್ತು ಡೇಟಾ ವಿಜ್ಞಾನವನ್ನು ಒಟ್ಟುಗೂಡಿಸುವ ಮೂಲಕ ನಿರಂತರ ನಾವೀನ್ಯತೆಯನ್ನು ಹೆಚ್ಚಿಸಲು ರೂಪಾಂತರವನ್ನು ಪ್ರತಿಬಿಂಬಿಸುತ್ತವೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.

---

ಹಿಮಾಚಲ ಪ್ರದೇಶದ ಕೀಲಾಂಗ್‌ನಲ್ಲಿ ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ-ಐಸಿಎಂಆರ್‌ನ ಸಾರ್ವಜನಿಕ ಆರೋಗ್ಯ ಸಂಶೋಧನಾ ಕೇಂದ್ರಕ್ಕೆ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜಗತ್ ಪ್ರಕಾಶ್ ನಡ್ಡಾ ನಾಳೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಈ ಕೇಂದ್ರವು ಹಿಮಾಲಯ ಪ್ರದೇಶದಲ್ಲಿ ಹವಾಮಾನ ವೈಪರೀತ್ಯಗಳಿಗೆ ಹೊಂದಿಕೊಳ್ಳುವ ಆರೋಗ್ಯ ಸೇವೆ ಹಾಗೂ ವೈದ್ಯಕೀಯ ಸಂಶೋಧನೆಯನ್ನು ಮತ್ತಷ್ಟು ಬಲಪಡಿಸಲಿದೆ. ಇದು ಡಿಜಿಟಲ್ ಆರೋಗ್ಯ ಸೇವೆ, ಟೆಲಿಮೆಡಿಸಿನ್, ಡ್ರೋನ್ ಆಧಾರಿತ ಆರೋಗ್ಯ ಸೇವಾ ಸರಕು ಸಾಗಣೆ ವ್ಯವಸ್ಥೆ ಹಾಗೂ ಆರೋಗ್ಯ ಮೇಲ್ವಿಚಾರಣಾ ವ್ಯವಸ್ಥೆ ಅಳವಡಿಸಿಕೊಂಡು, ದುರ್ಗಮ ಪ್ರದೇಶಗಳಲ್ಲಿ ಆರೋಗ್ಯ ಸೇವೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ತಲುಪಿಸುವ ಗುರಿ ಹೊಂದಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ತಿಳಿಸಿದೆ.

---

ರಸ್ತೆ ಸಾರಿಗೆ ಕ್ಷೇತ್ರದಲ್ಲಿ ತಕ್ಷಣವೇ ಶುದ್ಧ ಹಾಗೂ ಪರ್ಯಾಯ ಇಂಧನಗಳ ಬಳಕೆ ಮತ್ತು ಸುಧಾರಿತ ತಂತ್ರಜ್ಞಾನ ಅಳವಡಿಕೆ ಅಗತ್ಯವಾಗಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅಭಿಪ್ರಾಯಪಟ್ಟಿದ್ದಾರೆ.

ಗುಜರಾತ್‌ನ ಗಾಂಧಿನಗರದಲ್ಲಿ ನಿನ್ನೆ ಮೂರು ದಿನಗಳ ಬಹು ಮಾದರಿ ಸಾರಿಗೆ ಪ್ರದರ್ಶನ 'ಪ್ರವಾಸ್'ಗೆ ಚಾಲನೆ ನೀಡಿ ಮಾತನಾಡಿದ ಅವರು, ರಸ್ತೆ ಸಾರಿಗೆ ವ್ಯವಸ್ಥಾಪಕರು ಕಡಿಮೆ ವೆಚ್ಚದ ಪರ್ಯಾಯ ಇಂಧನಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಅಳವಡಿಸಿಕೊಳ್ಳುವಂತೆ ಅವರು ಕರೆ ನೀಡಿದರು.

ಖಾಸಗಿ ಬಸ್ ವ್ಯವಸ್ಥಾಪಕರಿಗಾಗಿ ವಿಮಾನ ನಿಲ್ದಾಣ ಮಾದರಿಯ ಆಧುನಿಕ ಬಸ್ ಪೋರ್ಟ್‌ಗಳನ್ನು ನಿರ್ಮಿಸುವ ಹೊಸ ಯೋಜನೆಯನ್ನು ಘೋಷಿಸಿದ ನಿತಿನ್ ಗಡ್ಕರಿ, ದೇಶದಾದ್ಯಂತದ ಸಾರಿಗೆ ವ್ಯವಸ್ಥಾಪಕರು ತಂತ್ರಜ್ಞಾನದ ಪರಿವರ್ತನೆಯನ್ನು ಸಮರ್ಥವಾಗಿ ಬಳಸಿಕೊಂಡು ಸುರಕ್ಷಿತ ಮತ್ತು ಆರಾಮದಾಯಕ ವಾಹನಗಳನ್ನು ಕಾರ್ಯಾಚರಣೆಗೆ ಬಳಸಬೇಕು. ಇದರಿಂದ ದೊರೆಯುವ ಹೆಚ್ಚುವರಿ ಲಾಭದ ಒಂದು ಭಾಗವನ್ನು ಪ್ರಯಾಣ ದರ ಕಡಿಮೆ ಮಾಡುವ ಮೂಲಕ ಸಾರ್ವಜನಿಕರಿಗೆ ವರ್ಗಾಯಿಸುವಂತೆ ಅವರು ಮನವಿ ಮಾಡಿದರು.

---

ಇರಾನ್ ಮಾಜಿ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಅವರ ಅಂತ್ಯಕ್ರಿಯೆ ಮಶ್ಹದ್‌ನಲ್ಲಿರುವ ಇಮಾಮ್ ರೆಜಾದಲ್ಲಿ ನಡೆಯಿತು. ಅವರ ಹಿರಿಯ ಮಗ ಸಯ್ಯದ್ ಮುಸ್ತಫಾ ಖಮೇನಿ ಧಾರ್ಮಿಕ ಪ್ರಾರ್ಥನೆಗಳನ್ನು ಸಲ್ಲಿಸಿದರು. ಈ ವೇಳೆ ಸಾವಿರಾರು ಬೆಂಬಲಿಗರು ಸೇರಿದ್ದರು.

ಈ ವರ್ಷದ ಫೆಬ್ರವರಿ ೨೮ ರಂದು ಅಮೆರಿಕ-ಇಸ್ರೇಲ್ ದಾಳಿಯಲ್ಲಿ ಅಯತೊಲ್ಲಾ ಅಲಿ ಖಮೇನಿ ಮೃತಪಟ್ಟರು. ಇದು ಪಶ್ಚಿಮ ಏಷ್ಯಾ ಪ್ರದೇಶದಾದ್ಯಂತ ವ್ಯಾಪಕ ಸಂಘರ್ಷಕ್ಕೆ ಕಾರಣವಾಯಿತು. ಅವರ ಮಗ ಮೊಜ್ತಾಬಾ ಖಮೇನಿ ಅವರನ್ನು ಇರಾನ್‌ನ ನೂತನ ಸರ್ವೋಚ್ಚ ನಾಯಕರನ್ನಾಗಿ ನೇಮಿಸಲಾಯಿತು.

---

ಲೈಂಗಿಕ ದೌರ್ಜನ್ಯವನ್ನು ಭಾರತ ಬಲವಾಗಿ ಖಂಡಿಸಿದೆ. ಇದನ್ನು ಯುದ್ಧ, ಭಯೋತ್ಪಾದನೆ, ಚಿತ್ರಹಿಂಸೆ ಮತ್ತು ರಾಜಕೀಯ ದಮನದ ಸಾಧನವಾಗಿ ಸಮುದಾಯಗಳನ್ನು ಅಧೀನಗೊಳಿಸಲು, ಭಿನ್ನಾಭಿಪ್ರಾಯವನ್ನು ನಿಗ್ರಹಿಸಲು ಬಳಸಲಾಗುತ್ತದೆ ಎಂದು ವಿವರಿಸಿದೆ.

ಸಂಘರ್ಷ-ಸಂಬಂಧಿತ ಲೈಂಗಿಕ ದೌರ್ಜನ್ಯದ ಕುರಿತಾದ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಮುಕ್ತ ಚರ್ಚೆಯಲ್ಲಿ ಮಾತನಾಡಿದ ವಿಶ್ವಸಂಸ್ಥೆಯ ಭಾರತದ ಖಾಯಂ ಪ್ರತಿನಿಧಿ ಪಿ.ಹರೀಶ್, ಶಿಕ್ಷೆಯಿಲ್ಲದ ಸಂಸ್ಕೃತಿಯ ನಡುವೆಯೂ ಇಂತಹ ಹಿಂಸಾಚಾರ ಮುಂದುವರೆದಿದೆ. ಇಂತಹ ಹೇಯ ಕೃತ್ಯಗಳನ್ನು ಭಾರತ, ಬಲವಾಗಿ ಖಂಡಿಸುತ್ತದೆ. ಇದನ್ನು ಪರಿಹರಿಸುವಲ್ಲಿ ಮಹಿಳಾ ಶಾಂತಿಪಾಲಕರ ನಿಯೋಜನೆಯು ಪರಿಣಾಮ ಬೀರಿದೆ ಎಂದು ಹೇಳಿದರು.

---

ಅಮೆರಿಕದ ಮೆಸ್ಸಚುಸೆಟ್ಸ್‌ನ ಬೋಸ್ಟನ್ ಕ್ರೀಡಾಂಗಣದಲ್ಲಿ ನಡೆದ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ ಮೊದಲ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಫ್ರಾನ್ಸ್ ತಂಡ, ಮೊರಾಕೊ ತಂಡವನ್ನು ೨-೦ ಗೋಲುಗಳಿಂದ ಮಣಿಸಿತು. ಈ ಮೂಲಕ ಫ್ರಾನ್ಸ್ ತಂಡ, ಸೆಮಿಫೈನಲ್ಸ್ ಪ್ರವೇಶಿಸಿದೆ.

ಫ್ರಾನ್ಸ್ ಪರ ಕಿಲಿಯನ್ ಎಂಬಪ್ಪೆ ಮತ್ತು ಔಸ್ಮಾನೆ ಡೆಂಬೆಲೆ ತಲಾ ಒಂದು ಗೋಲು ಗಳಿಸುವ ಮೂಲಕ ತಂಡದ ಗೆಲುವಿಗೆ ಕಾರಣರಾದರು.

ಎರಡನೇ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಸ್ಪೇನ್ ತಂಡ, ಬೆಲ್ಜಿಯಂ ಅನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯರಾತ್ರಿ ೧೨.೩೦ಕ್ಕೆ ಆರಂಭವಾಗಲಿದೆ.

ಉಳಿದ ಕ್ವಾರ್ಟರ್ ಫೈನಲ್ ಪಂದ್ಯಗಳಲ್ಲಿ, ನಾರ್ವೆ ತಂಡ, ಇಂಗ್ಲೆಂಡ್ ವಿರುದ್ಧ ಆಡಲಿದ್ದು, ಹಾಲಿ ಚಾಂಪಿಯನ್ ಅರ್ಜೆಂಟೀನಾ, ಭಾನುವಾರ ಬೆಳಗ್ಗೆ ಸ್ವಿಟ್ಜರ್ಲೆಂಡ್ ತಂಡದ ವಿರುದ್ಧ ಸೆಣಸಲಿದೆ.

---

ಬ್ರಿಸ್ಟಲ್‌ನ ಕೌಂಟಿ ಮೈದಾನದಲ್ಲಿ ನಿನ್ನೆ ನಡೆದ ಐದು ಪಂದ್ಯಗಳ ಟಿ-೨೦ ಕ್ರಿಕೆಟ್ ಸರಣಿಯ ನಾಲ್ಕನೇ ಪಂದ್ಯದಲ್ಲಿ ಭಾರತದ ವಿರುದ್ಧ ಇಂಗ್ಲೆಂಡ್ ೯ ವಿಕೆಟ್‌ಗಳಿಂದ ಜಯ ಗಳಿಸಿದೆ.

ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೫೮ ರನ್ ಗಳಿಸಿತು. ಭಾರತದ ಪರ ಶ್ರೇಯಸ್ ಅಯ್ಯರ್ ಅಜೇಯ ೮೦ ರನ್ ಗಳಿಸಿದರು.

ಗೆಲುವಿನ ಗುರಿ ಬೆನ್ನತ್ತಿದ ಇಂಗ್ಲೆಂಡ್, ೧೩.೫ ಓವರ್‌ಗಳಲ್ಲಿ ಒಂದು ವಿಕೆಟ್ ನಷ್ಟಕ್ಕೆ ೧೫೯ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು. ಹ್ಯಾರಿ ಬ್ರೂಕ್ ೩೫ ಎಸೆತಗಳಲ್ಲಿ ೬೯ ರನ್ ಸಿಡಿಸಿ, ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

---

ಲಾಸ್ ಏಂಜಲೀಸ್‌ನಲ್ಲಿ ೨೦೨೮ರಲ್ಲಿ ನಡೆಯಲಿರುವ ಒಲಿಂಪಿಕ್ಸ್ ಕ್ರೀಡಾಕೂಟಕ್ಕೆ ಕ್ರೀಡಾಪಟುಗಳ ಆಯ್ಕೆಗೆ ಸಂಬಂಧಿಸಿದ ಅರ್ಹತಾ ಮಾರ್ಗಸೂಚಿ, ಆಯ್ಕೆ ಮಾನದಂಡ ಹಾಗೂ ಪ್ರಕ್ರಿಯೆಯನ್ನು ಪ್ರಕಟಿಸುವಂತೆ ಕೇಂದ್ರ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ ಮಾನ್ಯತೆ ಪಡೆದಿರುವ ಎಲ್ಲಾ ರಾಷ್ಟ್ರೀಯ ಕ್ರೀಡಾ ಮಹಾಸಂಘಗಳಿಗೆ ನಿರ್ದೇಶನ ನೀಡಿದೆ.

ಒಲಿಂಪಿಕ್ಸ್, ಪ್ಯಾರಾಲಿಂಪಿಕ್ಸ್, ಏಷ್ಯನ್ ಗೇಮ್ಸ್, ಪ್ಯಾರಾ ಏಷ್ಯನ್ ಗೇಮ್ಸ್ ಹಾಗೂ ಕಾಮನ್‌ವೆಲ್ತ್ ಕ್ರೀಡಾಕೂಟಗಳಂತಹ ಪ್ರಮುಖ ಕ್ರೀಡಾಕೂಟಗಳಿಗೆ ಸಂಬಂಧಿಸಿದ ಆಯ್ಕೆ ನೀತಿ ಹಾಗೂ ಮಾನದಂಡಗಳನ್ನು ಆಯಾ ಕ್ರೀಡಾಕೂಟ ಆರಂಭಕ್ಕೆ ಕನಿಷ್ಠ ಎರಡು ವರ್ಷಗಳ ಮುಂಚಿತವಾಗಿ ಸಂಬಂಧಿಸಿದ ರಾಷ್ಟ್ರೀಯ ಕ್ರೀಡಾ ಮಹಾಸಂಘಗಳ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸಬೇಕು ಎಂದು ಸಚಿವಾಲಯ ತಿಳಿಸಿದೆ.

______ ಮುಕ್ತಾಯ ______